## ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಸಾಗರ ರಾಮಗೌಡಾ ಪಾಟೀಲ, ಸದಸ್ಯರು, ಬುಗಟೆ ಆಲೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

ಓದಲಾಗಿದೆ:

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ ಇವರ ಪತ್ರ ಸಂಖ್ಯೆ: ಜಿಪಂಬೆ/ಪರಿಷತ್/ವಿವ/ನೇರ/2017-18, ದಿನಾಂಕ 09.01.2018
2) ಇದೇ ಸಮಸಂಖ್ಯೆಯ ಕಾರಣ ಕೇಳುವ ನೋಟಿಸ್, ದಿನಾಂಕ 24.02.2018
3) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬುಗಟೆ ಆಲೂರ ಗ್ರಾಮ ಪಂಚಾಯತಿ ಇವರ ಪತ್ರ, ದಿನಾಂಕ 19.04.2018
4) ಇದೇ ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ 10.12.2018

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿ, ಶ್ರೀ ಸಾಗರ ರಾಮಗೌಡಾ ಪಾಟೀಲ, ಸದಸ್ಯರು, ಬುಗಟೆ ಆಲೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ ಇವರು ಬುಗಟೆ ಆಲೂರ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ ಅನುಮತಿ ಪಡೆಯದೆ ಸತತವಾಗಿ ನಾಲ್ಕು ಬಾರಿ ಗೈರು ಹಾಜರಾಗಿದ್ದು, ಇವರ ವಿರುದ್ಧ ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಳಗಾವಿ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸಿ, ಗ್ರಾಮ ಪಂಚಾಯತಿ ಸದಸ್ಯ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ ವಿವರಣೆ ನೀಡುವಂತೆ ಸದರಿ ಆಪಾದಿತ ಅಧ್ಯಕ್ಷರಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಮೇಲೆ ಓದಲಾದ (3) ರಲ್ಲಿ ಬುಗಟೆ ಆಲೂರ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯು ಸದರಿ ಗ್ರಾಮ ಪಂಚಾಯತಿ ಸದಸ್ಯರು ನಿರಂತರವಾಗಿ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು ಸುಮಾರು ಒಂದು ವರ್ಷದಿಂದ ಗ್ರಾಮದಲ್ಲಿ ವಾಸವಿರುವುದಿಲ್ಲವೆಂದು ಲಿಖಿತ ವರದಿ ನೀಡಿರುತ್ತಾರೆ. ಮುಂದುವರೆದು, ಸದರಿ ಗ್ರಾಮ ಪಂಚಾಯತಿ ಸದಸ್ಯರು ಸರ್ಕಾರದಿಂದ ಕಾರಣ ಕೇಳಿ ನೋಟೀಸಿಗೆ ಲಿಖಿತ ಆಕ್ಷೇಪಣೆ ಸಲ್ಲಿಸಿರುವುದಿಲ್ಲ.

ಪ್ರಕರಣದ ವಿಚಾರಣೆಯನ್ನು ದಿನಾಂಕ 19.12.2018ರಂದು ಜರುಗಿಸಲಾಗಿದೆ. ಹುಕ್ಕೇರಿ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಬುಗಟೆ ಆಲೂರ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಜರಿರುತ್ತಾರೆ ಹಾಗೂ ಎದುರುದಾರ ಬುಗಟೆ ಆಲೂರ ಗ್ರಾಮ ಪಂಚಾಯತಿಯ ಸದಸ್ಯರಾದ ಶ್ರೀ ಸಾಗರ ರಾಮಗೌಡ ಪಾಟೀಲ ರವರು ವಿಚಾರಣೆಗೆ ಗೈರು ಹಾಜರಾಗಿರುತ್ತಾರೆ.

ಸದರಿ ಸದಸ್ಯರು ದಿನಾಂಕ 16.05.2017, 03.08.2017, 04.10.2017 ಮತ್ತು 08.11.2017ರಂದು ನಡೆದ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ಸತತವಾಗಿ ಗೈರು ಹಾಜರಾಗಿದ್ದು, ಅಂದಿನಿಂದ ಗ್ರಾಮಸಭೆ, ಗ್ರಾಮ ಪಂಚಾಯತಿ ಸಾಮಾನ್ಯ ಸಭೆಗಳಿಗೆ ನಿರಂತರ ಗೈರು ಹಾಜರಾಗಿರುತ್ತಾರೆ ಹಾಗೂ ಕಳೆದ ಒಂದು ವರ್ಷದಿಂದ ಗ್ರಾಮದಲ್ಲಿ ವಾಸವಿರುವುದಿಲ್ಲ ಎಂದು ಪಂಚಾಯತಿ ಅಭಿವೃದ್ಧಿ ಅಧಿಕಾರಿ ತಿಳಿಸಿರುತ್ತಾರೆ ಹಾಗೂ ಲಿಖಿತ ವರದಿ ಸಲ್ಲಿಸಿರುತ್ತಾರೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ)(iii) ರನ್ವಯ; ಸರ್ಕಾರವು, ಗ್ರಾಮಪಂಚಾಯತ್‌ನ ಶಿಫಾರಸ್ಸಿನಂತೆ ಅಥವಾ ಅನ್ಯಥಾ ಯಾವೊಬ್ಬ ಸದಸ್ಯನನ್ನು, ಅವನು ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಸಭೆಗಳಿಗೆ ಹಾಜರಾಗಲು ತಪ್ಪಿದ್ದರೆ ಅವನಿಗೆ ಅಹವಾಲನ್ನು ಹೇಳಿಕೊಳ್ಳಲು ಅವಕಾಶ ನೀಡಿದ ನಂತರ ಮತ್ತು ಅಗತ್ಯವೆಂದು ತಾನು ಭಾವಿಸಿದಂಥ ವಿಚಾರಣೆ ಮಾಡಿದ ನಂತರ ತೆಗೆದು ಹಾಕುವುದು ಸೂಕ್ತವೆಂದು ಭಾವಿಸಿದ್ದರೆ ಆ ಸದಸ್ಯನನ್ನು ಆತನ ಸದಸ್ಯತ್ವದಿಂದ ತೆಗೆದುಹಾಕಬಹುದು ಎಂದು ಉಲ್ಲೇಖಿಸಲಾಗಿದೆ.

ಲಭ್ಯವಿರುವ ಎಲ್ಲಾ ದಾಖಲಾತಿಗಳು, ಆಪಾದಿತರ ಲಿಖಿತ ಹಾಗೂ ಮೌಖಿಕ ಹೇಳಿಕೆಗಳನ್ನು ಪರಿಶೀಲಿಸಲಾಗಿ, ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕು ಬುಗಟೆ ಆಲೂರ ಗ್ರಾಮ ಪಂಚಾಯತಿಯ ಸದಸ್ಯರಾದ ಶ್ರೀ ಸಾಗರ ರಾಮಗೌಡ ಪಾಟೀಲ ರವರು ಅನುಮತಿ ಪಡೆಯದೆ ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಸಭೆಗಳಿಗೆ ಗೈರು ಹಾಜರಾಗಿರುವುದರಿಂದ ಹಾಗೂ ಗ್ರಾಮ ಪಂಚಾಯತಿಯ ಸಭೆಗಳಿಗೆ ನಿರಂತರವಾಗಿ ಗೈರು ಹಾಜರಾಗಿರುವುದು ಸಾಬೀತಾಗಿರುವುದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ)(iii) ರನ್ವಯ ಇವರನ್ನು ಬುಗಟೆ ಆಲೂರ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ವಿಚಾರಣೆ ನಂತರ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ನಿರ್ಣಯಿಸಲಾಗಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 45 ಗ್ರಾಪಂಅ 2018 ಬೆಂಗಳೂರು, ದಿನಾಂಕ: 06.03.2019**

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ ಹುಕ್ಕೇರಿ ತಾಲ್ಲೂಕು ಬುಗಟೆ ಆಲೂರ ಗ್ರಾಮ ಪಂಚಾಯತಿಯ ಸದಸ್ಯರಾದ ಶ್ರೀ ಸಾಗರ ರಾಮಗೌಡ ಪಾಟೀಲ ರವರು ಅನುಮತಿ ಪಡೆಯದೆ ಪಂಚಾಯತ್‌ನ ನಾಲ್ಕು ಒಂದಾದ ಮೇಲೊಂದರಂತೆ ಆದ ಸಭೆಗಳಿಗೆ ಗೈರು ಹಾಜರಾಗಿರುವುದರಿಂದ ಹಾಗೂ ಗ್ರಾಮ ಪಂಚಾಯತಿಯ ಸಭೆಗಳಿಗೆ ನಿರಂತರವಾಗಿ ಗೈರು ಹಾಜರಾಗಿರುವುದು ಸಾಬೀತಾಗಿರುವುದರಿಂದ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ)(iii) ರನ್ವಯ ಇವರನ್ನು ಬುಗಟೆ ಆಲೂರ ಗ್ರಾಮ ಪಂಚಾಯತಿಯ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್) 7/3
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿ:**

1) ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ.
2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಳಗಾವಿ ಜಿಲ್ಲಾ ಪಂಚಾಯತಿ, ಬೆಳಗಾವಿ.
3) ಕಾರ್ಯನಿರ್ವಾಹಕ ಅಧಿಕಾರಿ, ಹುಕ್ಕೇರಿ ತಾಲ್ಲೂಕು ಪಂಚಾಯತಿ, ಹುಕ್ಕೇರಿ, ಬೆಳಗಾವಿ ಜಿಲ್ಲೆ. (ಸದರಿಯವರಿಗೆ ಆದೇಶದ ಪ್ರತಿಯನ್ನು ತಲುಪಿಸಿ, ಸ್ವೀಕೃತಿಯನ್ನು ಸರ್ಕಾರಕ್ಕೆ ಕಳುಹಿಸಲು ತಿಳಿಸಿದೆ)
4) ಶ್ರೀ ಸಾಗರ ರಾಮಗೌಡಾ ಪಾಟೀಲ, ಸದಸ್ಯರು, ಬುಗಟೆ ಆಲೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾಲ್ಲೂಕು, ಬೆಳಗಾವಿ ಜಿಲ್ಲೆ.
5) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಬುಗಟೆ ಆಲೂರ ಗ್ರಾಮ ಪಂಚಾಯತಿ, ಹುಕ್ಕೇರಿ ತಾ., ಬೆಳಗಾವಿ ಜಿಲ್ಲೆ
6) ಗಣಕ ಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
7) ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ.
2) ಸರ್ಕಾರದ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ
3) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾ.ಅ. & ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ